ರಾಜ್ಯದಲ್ಲಿ ವೈದ್ಯಾಧಿಕಾರಿಗಳ ಹುದ್ದೆಗಳು

365 (3243) ಶ್ರೀ ಉಮೇಶ್ ವಿಶ್ವನಾಥ್ ಕತ್ತಿ (ಹುಕ್ಕೇರಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು ?

ಆ) ಈ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

ಡಾ॥ ಎ. ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) 633

ಆ) ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ಸ್ನಾತಕೋತ್ತರ ವ್ಯಾಸಂಗವನ್ನು ಪೂರೈಸಿರುವ ವೈದ್ಯರುಗಳನ್ನು ನೇಮಕ ಮಾಡುವ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು. ಗ್ರಾಮಾಂತರ ಪ್ರದೇಶದಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು 573 ವೈದ್ಯರನ್ನು ನೇಮಕ ಮಾಡುವ ಸಮಯದಲ್ಲಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಶಿಕ್ಷಕರು-ವಿದ್ಯಾರ್ಥಿಗಳ ಪ್ರಮಾಣ

366 (3444) ಶ್ರೀ ಗೋಪಾಲ ಭಂಡಾರಿ. ಹೆಚ್. (ಕಾರ್ಕಳ) : ಮಾನ್ಯ ಪ್ರಾಥಮಿಕ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಸರ್ಕಾರಿ ಪ್ರಾಥಮಿಕ ಮತ್ತು ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಇರುವ ಹೆಚ್ಚುವರಿ ಶಿಕ್ಷಕರ ಸಂಖ್ಯೆ ಎಷ್ಟು?

ಆ) ಉಡುಪಿ ಮತ್ತು ದಕ್ಷಿಣ ಜಿಲ್ಲೆಗಳಲ್ಲಿ ತಾಲ್ಲೋಕುವಾರು ಎಷ್ಟು ?

ಇ) ಪೂರ್ವ ಪ್ರಾಥಮಿಕ ಶಾಲೆಗಳ ತರಗತಿಗಳನ್ನು ಮುಚ್ಚಲಾಗಿರುವ ಸ್ಥಳದಲ್ಲಿ ಬದಲಿ ವ್ಯವಸ್ಥೆ ಆಗಿದೆಯೇ? ಮತ್ತೆ ಅಲ್ಲಿದ್ದ ಶಾಲಾ ಮಾತೆ ಮತ್ತು ಆಯಾವರುಗಳ ಭವಿಷ್ಯವೇನು ? (ವಿವರ ಒದಗಿಸುವುದು)

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಹೆಚ್ಚುವರಿ ಶಿಕ್ಷಕರ ಸಂಖ್ಯೆ

ಸರ್ಕಾರಿ ಕಿರಿಯ	7486
ಪ್ರಾಥಮಿಕ ಶಾಲೆ	
ಸರ್ಕಾರಿ ಹಿರಿಯ	0428
ಪ್ರಾಥಮಿಕ ಶಾಲೆ	